ಶ್ರೀ ಟಿ.ಬಿ. ಜಯಚಂದ್ರ (ಕೃಷಿ ಸಚಿವರು) :—

ಅ) ದಿ.1-1-2000ರಿಂದ ಅಸ್ಥಿತ್ವಕ್ಕೆ ಬಂದಿರುವ ಜಲಾನಯನ ಅಭಿವೃದ್ಧಿ ಇಲಾಖೆಯ ಮೂಲಕ ಗೌರಿಬಿದನೂರು ತಾಲ್ಲೂಕಿನಲ್ಲಿ 2000-2001ನೇ ಸಾಲಿನ ಬಂಜರು ಭೂಮಿ ಅಭಿವೃದ್ಧಿ ಯೋಜನೆ ಅಡಿಯಲ್ಲಿ 11.50 ಲಕ್ಷ ರೂ. ವೆಚ್ಚದಲ್ಲಿ 6 ತಡೆ ಅಣೆ ಹಾಗೂ 96 ಬೋಲ್ಡರ್ ಚೆಕ್‌ಗಳನ್ನು ನಿರ್ಮಿಸಲಾಗಿದೆ.

ಆ) - ಇಲ್ಲ - ಉದ್ಭವಿಸುವುದಿಲ್ಲಾ.

ಬೆಂಗಳೂರು ನಗರದಲ್ಲಿ ರಸ್ತೆಗಳ ಅಗೆತವನ್ನು ನಿಲ್ಲಿಸುವುದು

2443 (3247) ಶ್ರೀ ಪಿ.ಜಿ.ಆರ್. ಸಿಂಧ್ಯ (ಕನಕಪುರ) :— ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಬೆಂಗಳೂರು ನಗರದಲ್ಲಿ ರಸ್ತೆ ಅಗೆತವನ್ನು ನಿಲ್ಲಿಸುವುದಾಗಿ ಸರ್ಕಾರ ಘೋಷಿಸಿದ್ದರೂ ಬೆಂಗಳೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ಮತ್ತು ದೂರವಾಣಿ ಕೇಂದ್ರಗಳಿಂದ ರಸ್ತೆ ಅಗೆತ ಕಾಮಗಾರಿಗಳು ನಿರಂತರವಾಗಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಇದಕ್ಕೆ ಸರ್ಕಾರವು ಶಾಶ್ವತ ಪರಿಹಾರವನ್ನೇನಾದರೂ ಹಮ್ಮಿಕೊಂಡಿದೆಯೇ? (ವಿವರಗಳನ್ನು ಕೊಡುವುದು)

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು) :—

ಅ) ಹೌದು.

ಆ) ಬೆಂಗಳೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯು ನಗರದ ಹಳೆಯ ಪ್ರದೇಶದಲ್ಲಿ ನೀರಿನ ಕೊಳವೆ ಮತ್ತು ಒಳಚರಂಡಿ ದುರಸ್ತಿಗಾಗಿ ರಸ್ತೆಯನ್ನು ಅಗೆಯಲಾಗಿದೆ. ಇದೇ ರೀತಿ ವಿದ್ಯುತ್ ಸಂಪರ್ಕ ಮತ್ತು ದೂರವಾಣಿ ಸಂಪರ್ಕ ದುರಸ್ತಿಗೆ ರಸ್ತೆ ಅಗೆತವನ್ನು ಮಾಡಲಾಗುತ್ತಿದೆ. ಹೊಸ ಕೊಳವೆಗಳನ್ನು ಅಳವಡಿಸುವ ಪ್ರಸ್ತಾವನೆಯಿದ್ದು ಎಲ್ಲಾ ರಸ್ತೆಗಳಲ್ಲೂ ಎಲ್ಲಾ ಸಂಪರ್ಕಗಳನ್ನು ಅಳವಡಿಸಲು ಸುಮಾರು 3 ವರ್ಷಗಳು ಬೇಕಾಗುತ್ತದೆ. ಹೊಸ ಸಂಪರ್ಕವನ್ನು ಪಾದಚಾರಿ ಮಾರ್ಗದಲ್ಲಿ ಒದಗಿಸಲು ಎಲ್ಲಾ ಪ್ರದೇಶಗಳಲ್ಲಿ ಸಾಧ್ಯವಿರುವ ಮಟ್ಟಿಗೆ ಕಂದಕಗಳಿಲ್ಲದೆ ಮತ್ತು ನಿರ್ದೇಶಿತ ತಾಂತ್ರಿಕ ಕೊರೆತ (ಡೈರೆಕ್ಷನಲ್ ಡ್ರಿಲ್ಲಿಂಗ್ ಟೆಕ್ನಾಲಜಿ) ಬಳಸಲಾಗುವುದು.